**Akashvani: Bangalore**
**Regional Bulletin In Kannada**
**12.03.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.03.2026: 14.30hrs**

*********

**ಮುಖ್ಯಾಂಶಗಳು :**

1. ರಾಜ್ಯದಲ್ಲಿ ಅನಿಲ ಪೂರೈಕೆ ವ್ಯತ್ಯಯ ಹಿನ್ನಲೆ; ಸಂಜೆ ನಡೆಯಲಿರುವ ಸಂಪುಟ ಸಭೆಯಲ್ಲಿ ಚರ್ಚೆ
2. ರಾಜ್ಯದ ಐದು ಕಡೆ ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆ - ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ವಿಧಾನಸಭೆಯಲ್ಲಿ ಸ್ಪಷ್ಟನೆ
3. ಬಿಪಿಎಲ್ ಪಡಿತರ ಚೀಟಿ ಪಡೆಯಲು ಆದಾಯ ಮಿತಿ ಮೂರು ಲಕ್ಷ ರೂಪಾಯಿಗೆ ಹೆಚ್ಚಿಸಲು ಸರ್ಕಾರ ಚಿಂತನೆ
4. ಬೆಂಗಳೂರಿನ ಯಲಹಂಕ ವಿದ್ಯುತ್ ಸ್ಥಾವರಕ್ಕೆ ಅನಿಲ ಪೂರೈಕೆ ಸ್ಥಗಿತಗೊಳಿಸಿದ ಗ್ಯಾಸ್ ಅಥಾರಿಟಿ ಆಫ್ ಇಂಡಿಯಾ ಲಿಮಿಟೆಡ್
5. ಕೊಡಗಿನಲ್ಲಿ ಮುಂದುವರಿದ ಕಾಡಾನೆ ದಾಳಿ; ವಿರಾಜಪೇಟೆಯಲ್ಲಿ ಕಾಫಿ ತೋಟದ ಮಾಲಿಕ ಸಾವು

**********

ರಾಜ್ಯದಲ್ಲಿ ಉಂಟಾಗಿರುವ ಅನಿಲ ಪೂರೈಕೆಯಲ್ಲಿನ ವ್ಯತ್ಯಯ ಹಾಗೂ ಇಂಧನ ಬಿಕ್ಕಟ್ಟಿನ ಬಗ್ಗೆ ಸಂಜೆ ನಡೆಯಲಿರುವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸತ್ತಿನಲ್ಲಿ ಬೇರೆ ವಿಚಾರಗಳ ಬಗ್ಗೆ ಮಾತನಾಡುವ ರಾಜ್ಯದ ಸಂಸದರು ಅಡುಗೆ ಅನಿಲ ಕೊರತೆ ವಿಚಾರವಾಗಿ ಮಾತನಾಡಬೇಕು ಎಂದು ಆಗ್ರಹಿಸಿದ್ದಾರೆ. ಅಡುಗೆ ಅನಿಲ ಕೊರತೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಇನ್ನೊಂದೆಡೆ ಇಂಧನ ಬೆಲೆ ಏರಿಕೆಯಿಂದ ಜನರು ತತ್ತರಿಸಿ ಹೋಗಿದ್ದಾರೆ. ಕೇಂದ್ರ ಸರ್ಕಾರವೇ ಇದಕ್ಕೆ ನೇರ ಹೊಣೆ ಎಂದು ಡಿ.ಕೆ. ಶಿವಕುಮಾರ್ ಆರೋಪಿಸಿದ್ದಾರೆ.

**********

ರಾಜ್ಯಾದ್ಯಂತ ೨೨ ಸರ್ಕಾರಿ ವೈದ್ಯಕೀಯ ಕಾಲೇಜುಗಳಿದ್ದು, ಹೊಸದಾಗಿ ಬಾಗಲಕೋಟೆ, ಕನಕಪುರ, ರಾಮನಗರ, ವಿಜಯಪುರ ಹಾಗೂ ಕೋಲಾರದಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಯಶಪಾಲ್ ಎ ಸುವರ್ಣ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಉಡುಪಿ ಜಿಲ್ಲೆಯಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲು ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಹೊಸ ವೈದ್ಯಕೀಯ ಕಾಲೇಜು ಆರಂಭಿಸಲು ೬೧೦ ಕೋಟಿ ರೂಪಾಯಿ ವೆಚ್ಚವಾಗಲಿದ್ದು, ೬೦ ಕೋಟಿ ರೂಪಾಯಿ ಅವರ್ತಕ ವೆಚ್ಚದ ಅವಶ್ಯಕತೆ ಇದೆ ಎಂದು ತಿಳಿಸಿದ್ದಾರೆ. ಉಡುಪಿ ಜಿಲ್ಲೆಯಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲು ಈಗಾಗಲೆ ಸಮೀಕ್ಷೆ ಆರಂಭಿಸಲಾಗಿದೆ. ಖಾಸಗಿ ಸಹಭಾಗಿತ್ವ ಬೇಡ ಎಂದರೆ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸಲು ವಿಳಂಬವಾಗಲಿದೆ ಎಂದು ಹೇಳಿದ್ದಾರೆ. ಮಾನಪ್ಪ.ಡಿ.ವಜ್ಜಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಡಾ ಶರಣಪ್ರಕಾಶ್.ಆರ್.ಪಾಟೀಲ್ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಒಂದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಲು ಸರ್ಕಾರ ಯೋಜನೆ ರೂಪಿಸಿದೆ ಎಂದು ಮಾಹಿತಿ ನೀಡಿದ್ದಾರೆ.

**********

ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಲಭ್ಯವಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಕುಷ್ಟಗಿ ಶಾಸಕ ದೊಡ್ಡನಗೌಡ ಹನುಮಗೌಡ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯವಿರುವ ಔಷಧಿ ಖರೀದಿಸಲು ಹಣಕಾಸಿನ ವ್ಯವಸ್ಥೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಪಡೆಯಲು ಆದಾಯ ಮಿತಿಯನ್ನು ಮೂರು ಲಕ್ಷ ರೂಪಾಯಿಗೆ ಹೆಚ್ಚಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ತಿಳಿಸಿದ್ದಾರೆ. ಮಲ್ಲೇಶ್ವರ ಶಾಸಕ ಡಾ ಸಿ.ಎನ್.ಅಶ್ವಥ್ ನಾರಾಯಣ ಅವರ ಪ್ರಶ್ನೆಗೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರ ಪರವಾಗಿ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್, ಆದ್ಯತಾ ವಲಯದ ಪಡಿತರ ಚೀಟಿ ಪಡೆಯಲು ಹಾಲಿ ಒಂದು ಲಕ್ಷ ೨೦ ಸಾವಿರ ರೂಪಾಯಿ ನಿಗದಿ ಪಡಿಸಲಾಗಿದೆ. ಅದನ್ನು ಮೂರು ಲಕ್ಷ ರೂಪಾಯಿಗೆ ಹೆಚ್ಚಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ಹೇಳಿದ್ದಾರೆ.

**********

ಮಾನವ - ವನ್ಯ ಪ್ರಾಣಿಗಳ ಸಂಘರ್ಷದ ಕಾರಣ ಬಂಡಿಪುರ ಮತ್ತು ನಾಗರಹೊಳೆ ಅಭಯಾರಣ್ಯದಲ್ಲಿ ನಿಲ್ಲಿಸಲಾಗಿದ್ದ ಸಫಾರಿಯನ್ನು ಮತ್ತೆ ಆರಂಭಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ್.ಬಿ.ಖಂಡ್ರೆ ವಿಧಾನಸಭೆಗೆ ಮಾಹಿತಿ ನೀಡಿದ್ದಾರೆ. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ವನ್ಯಜೀವಿ ಮಂಡಳಿ ಸಭೆ ನಡೆಸಿದ ನಂತರ ಸಫಾರಿ ಮತ್ತೆ ಆರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಬಂಡಿಪುರದಲ್ಲಿ ಹುಲಿಗಳ ಸಂಖ್ಯೆ ಹೆಚ್ಚಾಗಿದ್ದು ಅದಕ್ಕೆ ತಕ್ಕಂತೆ ಅರಣ್ಯ ಹೆಚ್ಚಾಗುತ್ತಿಲ್ಲ. ೧೯೭೨ರಲ್ಲಿ ೧೭ ಇದ್ದ ಹುಲಿಗಳ ಸಂಖ್ಯೆ ಈಗ ೧೭೫ ಆಗಿದೆ. ಬಂಡಿಪುರ ಸಫಾರಿ ನಡೆಯುವ ಪ್ರದೇಶದಲ್ಲಿ ೭೦ ರಿಂದ ೭೨ ಹುಲಿಗಳಿವೆ ಎಂದು ಹೇಳಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಪುಟ್ಟರಂಗಶೆಟ್ಟಿ ಅವರ ಪ್ರಶ್ನೆಗೆ ಉತ್ತರಸಿದ ಸಚಿವರು ವನ್ಯಜೀವಿಗಳ ದಾಳಿಯಿಂದ ಮೃತಪಟ್ಟವರಿಗೆ ೨೦ ಲಕ್ಷ ರೂಪಾಯಿ ಹಾಗೂ ಹಾವು ಕಚ್ಚಿ ಮೃತ್ತಪಟ್ಟವರಿಗೆ ೨ ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ.

**********

ಕರ್ನಾಟಕ ಹಾಲು ಮಹಾ ಮಂಡಳದ ಜಿಲ್ಲಾ ಹಾಲು ಒಕ್ಕೂಟಗಳ ವ್ಯಾಪ್ತಿಯ ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಉತ್ಪಾದಕರು ಸರಬರಾಜು ಮಾಡುವ ಹಾಲಿನಲ್ಲಿ ಉಪ್ಪು ಹಾಗೂ ಸಕ್ಕರೆ ಕಲಬೆರಕೆ ಅಂಶ ಪತ್ತೆಯಾಗಿದೆ ಎಂದು ಮೇಲ್ಮನೆಯಲ್ಲಿ ಸಭಾನಾಯಕ ಬೋಸರಾಜು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್‌ನ ಮಧು ಜಿ. ಮಾದೇಗೌಡ ಅವರ ಪ್ರಶ್ನೆಗೆ ಮುಖ್ಯಮಂತ್ರಿಗಳ ಪರವಾಗಿ ಉತ್ತರ ನೀಡಿದ ಬೋಸರಾಜು, ಹಾಲಿನಲ್ಲಿ ಕಲಬೆರಕೆ ಅಂಶ ಪತ್ತೆಹಚ್ಚಲು ಸಹಕಾರ ಸಂಘಗಳಿಗೆ ಪರೀಕ್ಷಾ ಕಿಟ್ ಒದಗಿಸಿ, ಪರೀಕ್ಷಿಸಲಾಗುತ್ತಿದೆ ಎಂದು ಹೇಳಿದ್ದಾರೆ.

**********

ಇರಾನ್ - ಇಸ್ರೇಲ್ ಸಂಘರ್ಷದ ಹಿನ್ನೆಲೆಯಲ್ಲಿ ಬೆಂಗಳೂರಿನ ಯಲಹಂಕ ವಿದ್ಯುತ್ ಸ್ಥಾವರಕ್ಕೆ ಇಂದಿನಿಂದ ಗ್ಯಾಸ್ ಅಥಾರಿಟಿ ಆಫ್ ಇಂಡಿಯಾ ಲಿಮಿಟೆಡ್ - ಗೇಲ್ ಅನಿಲ ಪೂರೈಕೆಯನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಿದೆ ಎಂದು ಇಂಧನ ಸಚಿವಾಲಯದ ಅಧಿಕಾರಿಗಳು ತಿಳಿಸಿದ್ದಾರೆ. ಕರ್ನಾಟಕ ಪವರ್ ಕಾರ್ಪೊರೇಷನ್ ಲಿಮಿಟೆಡ್ ಸ್ಥಾಪಿಸಿದ ೩೭೦ ಮೆಗಾವ್ಯಾಟ್ ಸಾಮರ್ಥ್ಯದ ಯಲಹಂಕ ಸ್ಥಾವರವು ರಾಜ್ಯದ ಏಕೈಕ ಅನಿಲ ಆಧಾರಿತ ವಿದ್ಯುತ್ ಉತ್ಪಾದನಾ ಕೇಂದ್ರವಾಗಿದೆ. ಅನಿಲ ಪೂರೈಕೆಯಲ್ಲಿ ಅಡಚಣೆ ಉಂಟಾದರೆ ಅದರ ಉತ್ಪಾದನೆಯ ಮೇಲೆ ಪರಿಣಾಮ ಬೀರಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ. ದೇಶಾದ್ಯಂತ ಎಲ್‌ಪಿಜಿ ಸರಬರಾಜುಗಳಲ್ಲಿ

ವ್ಯತ್ಯಯ ಉಂಟಾಗಿದ್ದು, ಕೇಂದ್ರ ಸರ್ಕಾರ ನೈಸರ್ಗಿಕ ಅನಿಲ ಹಂಚಿಕೆಗೆ ಆದ್ಯತೆ ನೀಡಿದೆ. ದೇಶೀಯ ಬಳಕೆಗೆ ಮೊದಲ ಸ್ಥಾನ ನೀಡಿ, ಸಾರಿಗೆ ಮತ್ತು ರಸಗೊಬ್ಬರ ಕ್ಷೇತ್ರಗಳಿಗೆ ಎರಡನೇ ಆದ್ಯತೆ ನೀಡಲಾಗಿದೆ. ವಿದ್ಯುತ್ ಉತ್ಪಾದನೆಯನ್ನು ಅತ್ಯಂತ ಕಡಿಮೆ ಆದ್ಯತೆಯಲ್ಲಿ ಇರಿಸಲಾಗಿದೆ.

**********

ಕೊಡಗು ಜಿಲ್ಲೆಯಲ್ಲಿ ಕಾಡಾನೆ ದಾಳಿ ಮುಂದುವರೆದಿದೆ. ವಿರಾಜಪೇಟೆ ತಾಲೂಕಿನ ಸಿದ್ದಾಪುರ ಹೈಸ್ಕೂಲ್ ಪೈಸಾರಿ ಬಳಿ ಕಾಫಿ ತೋಟ ಮಾಲೀಕ ಗಣಪತಿ ಅವರ ಮೇಲೆ ಕಾಡಾನೆ ದಾಳಿ ನಡೆಸಿದ್ದು, ಸ್ಥಳದಲ್ಲಿಯೇ ಅವರು ಮೃತಪಟ್ಟಿದ್ದಾರೆ. ಕಾಫಿ ತೋಟ ವೀಕ್ಷಣೆಗೆ ತೆರಳಿದ್ದ ವೇಳೆ, ಆನೆ ದಾಳಿ ನಡೆಸಿದ್ದು, ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾಡಾನೆ ದಾಳಿ ತಡೆಗೆ ಶಾಶ್ವತ ಪರಿಹಾರ ಒದಗಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ. ಮೂರು ದಿನದ ಅಂತರದಲ್ಲಿಯೇ ಕೊಡಗಿನಲ್ಲಿ ಕಾಡಾನೆ ದಾಳಿಗೆ ಇಬ್ಬರು ಸಾವನ್ನಪ್ಪಿದ್ದಾರೆ.

**********

ಒಂದು ಸಣ್ಣ ಬೀಜದ  ಉಂಡೆಗಳು ದೊಡ್ಡ ಅರಣ್ಯದ ಸೃಷ್ಟಿಗೆ ಮುನ್ನುಡಿ ಬರೆಯುತ್ತವೆ ಎಂದು ವಿಜಯನಗರ ಪ್ರಥಮ ದರ್ಜೆ ಕಾಲೇಜಿನ ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಹೇಮಾವತಿ ಅಭಿಪ್ರಾಯಪಟ್ಟಿದ್ದಾರೆ. ಮಂಡ್ಯ ನಗರದ ಮಹಿಳಾ ಕಾಲೇಜಿನಲ್ಲಿ ಸಸ್ಯಶಾಸ್ತ್ರ ವಿಭಾಗ, ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಪಾನಿನ ಮಸನೋಬು ಫುಕುವೋಕ ಈ ತಂತ್ರಗಳ ಮೂಲಕ ಸಸ್ಯಗಳನ್ನು ಬೆಳೆಸಬಹುದು ಎಂದು ಮೊದಲ ಪ್ರಯೋಗ ಮಾಡಿದರು. ತದನಂತರ ನ್ಯೂಯಾರ್ಕ್ ಸಿಟಿಯಲ್ಲಿ ಲೀಜ್ ಎಂಬ ಮಹಿಳೆ ಎಲ್ಲಿ ಮರಗಳಿಲ್ಲವೋ ಅಲ್ಲಿ ಇದನ್ನು ಬಳಸಿ ಸಸಿಗಳನ್ನು ಬೆಳೆಸುವ ಪ್ರಯೋಗಕ್ಕೆ ನಾಂದಿ ಹಾಡಿದರು. ಇಂದು ಭಾರತ ಕರ್ನಾಟಕ ಸೇರಿದಂತೆ ಹಲವಾರು ಭಾಗಗಳಲ್ಲಿ ಈ ಒಂದು ಪ್ರಕ್ರಿಯೆಯನ್ನು ಬಳಸಿ ಅರಣ್ಯವನ್ನು ಬೆಳೆಸುವಂತಹ ಕಾರ್ಯಗಳು ನಡೆಯುತ್ತಿವೆ ಎಂದು ತಿಳಿಸಿದರು.

**********

ಅಡುಗೆ ಅನಿಲ ಸಿಲಿಂಡರ್‌ಗಳ ಕೃತಕ ಅಭಾವ ಮತ್ತು ಕಾಳಸಂತೆಯಲ್ಲಿ ಮಾರಾಟ ಪ್ರಕರಣಗಳು ಕಂಡು ಬಂದರೆ ಏಜೆನ್ಸಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಹೇಳಿದ್ದಾರೆ. ಅಡುಗೆ ಅನಿಲ ಪೂರೈಕೆದಾರರು ಮತ್ತು ಸಂಬಂಧಿಸಿದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೩೮ ಐಒಸಿಎಲ್,

ಹೆಚ್‌ಪಿಸಿಎಲ್ ಮತ್ತು ಬಿಪಿಸಿಎಲ್ ಕಂಪನಿಗಳ ಅಡಿಯಲ್ಲಿ ಏಜೆನ್ಸಿಗಳು ಕಾರ್ಯನಿರ್ವಹಿಸುತ್ತಿವೆ. ಸಾಕ? ಅಡುಗೆ ಅನಿಲ ದಾಸ್ತಾನು ಲಭ್ಯವಿದ್ದು, ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗಿರುವುದಿಲ್ಲ. ಮನೆ ಬಳಕೆಯ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಗಳಿಗೆ ಬಳಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

**********

**ಸಂಕ್ಷಿಪ್ತ ಸುದ್ದಿ**

೧. ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನಿರ್ದೇಶನದಂತೆ ಹಾಗೂ ಸಾರ್ವಜನಿಕ ದೂರಿನ ಮೇರೆಗೆ ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಎಚ್‌ಬಿಆರ್ ಲೇಔಟ್ ಪ್ರದೇಶದಲ್ಲಿ ಪಶುಪಾಲನಾ ವಿಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿ ಮಾಂಸದ ಮಾರಾಟ ಮಳಿಗೆಗಳಿಗೆ ತೆರಳಿ, ತಪಾಸಣೆ ನಡೆಸಿದರು.

೨. ನವದೆಹಲಿಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿರುವ ಸಂಸದ ಯದುವೀರ್ ದತ್ತ ಒಡೆಯರ್ ಪ್ರಸಕ್ತ ಹಣಕಾಸು ವರ್ಷದ ಕೇಂದ್ರ ಬಜೆಟ್‌ನಲ್ಲಿ ಘೋಷಿಸಲಾದ ಚೌಕಟ್ಟಿನಡಿಯಲ್ಲಿ ಮೈಸೂರನ್ನು ನಗರ ಆರ್ಥಿಕ ಪ್ರದೇಶ ಆಗಿ ಸೇರಿಸುವ ಕುರಿತು ಪ್ರಸ್ತಾವನೆ ಸಲ್ಲಿಸಿದ್ದಾರೆ.

*****END*****